ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೭	ಬೆಂಗಳೂರು, ಗುರುವಾರ, ನವೆಂಬರ್ ೨೯, ೨೦೧೨ (ಮಾರ್ಗಶಿರ ೮, ಶಕ ವರ್ಷ ೧೯೩೪)	ಸಂಚಿಕೆ ೪೭

ಭಾಗ – ೫

ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

FORM-IV

(SEE RULE-12)

NOTICE

It is hereby notified that the undersigned has changed his/her name from **TIMMANNA. ADIVEPPA, WADDAR. To TIMMANNA. ADIVEPPA. BADAMI.**

P.D.c/n 125 **T.A. WADDAR**

FORM-IV

(SEE RULE-12)

NOTICE

It is hereby notified that the undersigned has changed his/her name from **N. SANDHYA to N. S. SANDHYA.**

P.D.c/n 126 **N. SANDHYA**

FORM-IV

(SEE RULE-12)

NOTICE

It is hereby notified that the undersigned has changed his/her name from **SAJEEDABEGAM IMAMSAHEB KHAMAGAL to SAJEEDABEGAM ATAULLA CHOPDAR**.

P.D.c/n 127 **SAJEEDABEGAM IMAMSAHEB KHAMAGAL**

KARNATAKA STATE BOARD OF WAKFS

[Constituted by the Govt. of Karnataka under the Wakf Act, 1995 (Central Act-43 of 95)]

Darul Awkaf, # 6, Cunningham Road, Bangalore-52

No. KBW/REG/14/BNR/2010-11, Dated : 13-04-2011

CERTIFICATE OF REGISTRATION

It is hereby certified that the Wakf described hereunder is registered and brought on to the Register of Wakfs in accordance with Section 36 of the Wakf Act, 1995.

Sl. No. of Kitabul Awkaf	Name, Class & Description of the Waif	Particulars of Wakf Properties	Name of the Muthawallis
16	Khabrasthan (Shia) Additional property of Anjuman-e-Sajjadia (Shia) Sulebele, Hoskote Taluk, Bangalore (Rural)	**PROPERTIES** Khabrasthan (Shia) In old Sy. No. 63 Re-Survey No. 76 at Bothiganahalli Village, **Measurement : 02 Acres – 05 Guntas.** **BOUNDARIES** East : Shanta Purida Gadi West : Remaining land in Sy. No. 63 North : Remaining land in Sy. No. 63 South : West land belonging to Sulebele Village	The Managing Committee represented by its President.

This certificate is issued under powers delegated vide Order No. KBW/110/ADM/05-06 Dated 02-03-2006 of Karnataka State Board of Wakfs., Bangalore.

Chief Executive Officer

Karnataka State Board of Wakfs,

ಕರ್ನಾಟಕ ರಾಜ್ಯ ವಕ್ಫ್ ಮಂಡಳಿ

No. KSBW/REG/31/BNR/2011-12, Dated : 31-07-2012

CERTIFICATE OF REGISTRATION

It is hereby certified that the below mentioned Wakf is registered with the Karnataka State Board of Wakfs under Section 36 of the Wakf Act, 1995.

Sl. No. of Kitabul Awkaf	Name, Class & Description of the Wakfs	Particulars of Wakf Properties	Name of the Muthavalli
20	Additional property of Eidgah under the management of Jamia Masjid, Ahle Sunnathul Jamath, Hoskote Town, Bangalore (R) District.	**PROPERTIES** **Sy. No. 365, of Hoskote Town** **Extent : 04A-03G** **BOUNDARIES** East : Road West : Private property North : Private property South : Road	The Managing Committee represented by its President.

This certificate is issued under powers delegated vide Order No. KBW/110/ADM/05-06 Dated 02-03-2006 of Karnataka State Board of Wakfs., Bangalore.

Addl. Chief Executive Officer

P.D. 118 Karnataka State Board of Wakfs,

KARNATAKA STATE BOARD OF WAKFS

"DARUL AWKAF" IIIrd Floor, No. 6 Cunningham Road, Bangalore-560 052

No. KTW/REG/2/BNR/89-90, Dated : 20-10-1989

CERTIFICATE OF REGISTRATION

It is hereby certified that the Wakf described hereunder is registered and brought on to the Register of Wakfs in accordance with Section 25 & 26 of the Wakf Act, 1954 (29 of 1954).

Sl. No. of Kitabul Awakf	Name, Class & Description of the Wakfs	Particulars of Wakf Properties	Name of the Muthavalli
490	Anjuman-e-Sajjadia (Shia) Sulebele, Sulebele Hobli, Hoskote Taluk Bangalore District.	Khane Shumari Old Nos. 364A & 365A Bearing Khata No. 193 Khane Shumari Old Nos. 364B, 365B & 367 Bearing Khata No. 194 New Khane Shumari Nos. 364, 367, 364, 365 **Measuring towards :** East-West : North 76', South 78' North-South-East 51', West 70' **Boundaries :** East : Tarkari Babu Saheb House West : Kote Masjid & Ahoor Khana North : Sri Ahmed Khan land South : 5' feet Road.	Anjuman-e-Sajjadia (Shia) Sulebele, Sulebele Hobli, Hoskote Taluk, Bangalore District, Represented by its President.

Secretary,
The Karnataka Board of Wakfs,

PD - 119

ಕೋಲಾರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ.

ಅಧಿಸೂಚನೆ ಸಂಖ್ಯೆ : ಎಡಿಎಂ 02/2012 ದಿನಾಂಕಃ 06-11-2012.

ವಿಷಯ : ಶೀಘ್ರಲಿಪಿಗಾರ, ಬೆರಳಚ್ಚುಗಾರ ಹಾಗೂ ನಕಲು-ಬೆರಳಚ್ಚುಗಾರರ ಹುದ್ದೆಗಳ ನೇಮಕಾತಿ ಬಗ್ಗೆ.

ಉಲ್ಲೇಖಃ

1. ಸರ್ಕಾರಿ ಅಧಿಸೂಚನೆ ಸಂಖ್ಯೆಃ ಎಲ್‌ಎಡಬ್ಲ್ಯೂ 230/ಎಲ್‌ಎಸಿ-2010, ದಿನಾಂಕಃ 29-03-2011, ಎಲ್‌ಎಡಬ್ಲ್ಯೂ 186/ಎಲ್‌ಎಸಿ-2011, ದಿನಾಂಕಃ 21-09-2011.
2. ಸರ್ಕಾರಿ ಅಧಿಸೂಚನೆ ಸಂಖ್ಯೆಃ ಎಲ್‌ಎಡಬ್ಲ್ಯೂ 193/ಎಲ್‌ಎಸಿ-2012, ದಿಃ 27-08-2012.
3. ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ರವರ ಪತ್ರ ಸಂಖ್ಯೆ ಎಲ್‌ಸಿಎ II 36/2003 ದಿನಾಂಕ: 23-06-2011, ಎಲ್‌ಸಿಎ II 54/2011 ದಿನಾಂಕ 01-10-2011 ಮತ್ತು ಎಲ್‌ಸಿಎ II 128/2012 ದಿನಾಂಕಃ 14.09.2012.

ಕೋಲಾರ ಜಿಲ್ಲೆ, ನ್ಯಾಯಾಂಗ ಇಲಾಖೆಯಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಹಾಗೂ ನಕಲು ಬೆರಳಚ್ಚುಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಈ ಅಧಿಸೂಚನೆಯ ಜೊತೆಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ 10-12-2012, ಅಪರಾಹ್ನ 5-00 ಗಂಟೆಯವರೆಗೆ.

1. ಶೀಘ್ರಲಿಪಿಗಾರರು : ಖಾಲಿ ಇರುವ ಹುದ್ದೆಗಳು - 12.

ವೇತನ ಶ್ರೇಣಿಃ 14550-350-15600-400-17200-450-19000-500-21000-600-24600-7000-26700.

ಹುದ್ದೆಗಳ ವರ್ಗೀಕರಣ:

ಮೀಸಲಾತಿ	ಮಹಿಳಾ ಅಭ್ಯರ್ಥಿ	ಗ್ರಾಮೀಣ ಅಭ್ಯರ್ಥಿ	ಇತರೆ	ಒಟ್ಟು ಹುದ್ದೆಗಳು
ಪರಿಶಿಷ್ಟ ಜಾತಿ	01	–	01	02
ಪ್ರವರ್ಗ – 2 (ಎ)	02	01	01	04
ಪ್ರವರ್ಗ – 2 (ಬಿ)	–	–	01	01
ಪ್ರವರ್ಗ – 3 (ಎ)	–	–	01	01
ಪ್ರವರ್ಗ – 3 (ಬಿ)	–	–	01	01
ಪ್ರವರ್ಗ – 1	01	–	–	01
ಸಾಮಾನ್ಯ	01	01	–	02
ಒಟ್ಟು	**05**	**02**	**05**	**12**

ಶೀಘ್ರಲಿಪಿಗಾರರಿಗೆ ವಿದ್ಯಾರ್ಹತೆ: ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಎರಡೂ ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಮತ್ತು ಶೀಘ್ರಲಿಪಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ: ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಅರ್ಹತಾ ಪರೀಕ್ಷಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ: ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ.

02. ಬೆರಳಚ್ಚುಗಾರರು : ಖಾಲಿ ಇರುವ ಹುದ್ದೆಗಳು – 03

ವೇತನ ಶ್ರೇಣಿ 11600–200–12000–250–13000–300–14200–350–15600–400–17200–450–19000–500–21000.

ಹುದ್ದೆಗಳ ವರ್ಗೀಕರಣ

ಮೀಸಲಾತಿ	ಗ್ರಾಮೀಣ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರೆ	ಒಟ್ಟು ಹುದ್ದೆಗಳು
ಪರಿಶಿಷ್ಟ ಜಾತಿ	–	–	01	01
ಸಾಮಾನ್ಯ	01	01	–	02
ಒಟ್ಟು	01	01	01	03

ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಇಂಗ್ಲಿಷ್ ಎರಡೂ ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಪರೀಕ್ಷೆಗಳನ್ನು, ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ : ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ : ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ.

03. ಬೆರಳಚ್ಚು – ನಕಲುಗಾರರು : ಖಾಲಿ ಇರುವ ಹುದ್ದೆಗಳು - 01

ವೇತನ ಶ್ರೇಣಿ 11600–200–12000–250–13000–300–14200–350–15600–400–17200–450–19000–500–21000.

ಹುದ್ದೆಗಳ ವರ್ಗೀಕರಣ

ಮೀಸಲಾತಿ	ಕನ್ನಡ ಮಾಧ್ಯಮ ಅಭ್ಯರ್ಥಿ	ಒಟ್ಟು ಹುದ್ದೆ
ಸಾಮಾನ್ಯ	01	01
ಒಟ್ಟು	01	01

ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ; ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಇಂಗ್ಲಿಷ್ ಎರಡೂ ಭಾಷೆಯಲ್ಲೂ ಕಿರಿಯ ಶ್ರೇಣಿ ಬೆರಳಚ್ಚು ಪರೀಕ್ಷೆಗಳನ್ನು, ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ : ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ: ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ.

ಪ್ರಥಮ ರಾಷ್ಟ್ರೀಯ ನ್ಯಾಯಾಂಗ ವೇತನ ಆಯೋಗದ ಶಿಫಾರಸ್ಸಿನಂತೆ, ಸರ್ಕಾರಿ ಆದೇಶ ಸಂಖ್ಯೆ ಲಾ 128 ಎಲ್.ಎ.ಸಿ. 2005 ದಿನಾಂಕ 14.07.2008 ಮತ್ತು ದಿನಾಂಕ 29.10.2010 ರನ್ವಯ ಒಂದು ಹೆಚ್ಚುವರಿ ವೇತನ ಮುಂಬಡ್ತಿಗೆ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳು ಅರ್ಹರಿರುತ್ತಾರೆ.

ಮಹಿಳಾ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಸದರಿ ಹುದ್ದೆಗಳನ್ನು ಸಾಮಾನ್ಯ ಇತರೆ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಕೋಲಾರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

ವಯೋಮಿತಿ:

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ. ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ. ಗರಿಷ್ಠ ವಯೋಮಿತಿ

ಸಾಮಾನ್ಯ ವರ್ಗ	35 ವರ್ಷ
2ಎ, 2ಬಿ, 3ಬಿ, 3ಎ	38 ವರ್ಷ
ಪ.ಜಾತಿ, ಪ. ಪಂಗಡ, ಪ್ರವರ್ಗ – 1	40 ವರ್ಷ

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

ವಯೋಮಿತಿ ಸಡಲಿಕೆ ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು

ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

3. ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

ಪರಿವೀಕ್ಷಣಾ ಅವಧಿ :

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ :

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

ಅರ್ಜಿ ಸಲ್ಲಿಸುವ ವಿಧಾನ :

ಈ ಪ್ರಕಟಣೆಯಲ್ಲಿ ಲಗತ್ತಿಸಿರುವ ಅರ್ಜಿ ನಮೂನೆಯನ್ನು ಬೆರಳಚ್ಚು ಮಾಡಿ/ಕಂಪ್ಯೂಟರ್ ಮೂಲಕ ತಯಾರಿಸಿ, ಅರ್ಜಿಯನ್ನು ತಮ್ಮ ಸ್ವಂತ ಕೈಬರಹದಲ್ಲಿ ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೂ ಸಹ ಸಹಿ ಮಾಡುವುದು ಹಾಗೂ ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡುವುದು. ಹುದ್ದೆಗೆ ಸಂಬಂಧಿಸಿದಂತೆ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ಪಡೆದು, ಅವುಗಳ ನಕಲುಗಳನ್ನು ಸ್ವಯಂ ಧೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು **'ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೋಲಾರ – 563101',** ಇವರಿಗೆ ದಿನಾಂಕ : 10–12–2012 ಅಪರಾಹ್ನ 5–00 ಗಂಟೆಯೊಳಗೆ ತಲುಪುವಂತೆ ಕಳುಹಿಸುವುದು.

ಅರ್ಜಿಯನ್ನು ಕಳುಹಿಸುವ ಲಕೋಟೆ ಮೇಲೆ ಅಭ್ಯರ್ಥಿಯು ಯಾವ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಾನೆ ಎಂಬುದರ ಬಗ್ಗೆ ಹುದ್ದೆಯ ಹೆಸರನ್ನು ನಮೂದಿಸುವುದು.

ಸೂಚನೆ:

ಒಂದಕ್ಕಿಂತ ಹೆಚ್ಚು ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಂದಕ್ಕಿಂತ ಹೆಚ್ಚು ಮೀಸಲಾತಿಯನ್ನು ಕೋರಿ ಒಂದೇ ಅರ್ಜಿಯಲ್ಲಿ ನಮೂದಿಸಿದ್ದರೆ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು:

ಅಭ್ಯರ್ಥಿಗಳು ಈ ಕೆಳಕಂಡ ದಾಖಲಾತಿಗಳ ಸ್ವಯಂ ಧೃಢಿಕರಿಸಿದ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ.
2. ಜನ್ಮ ದಿನಾಂಕದ ಧೃಡೀಕರಣಕ್ಕಾಗಿ ಎಸ್‌ಎಸ್‌ಎಲ್‌ಸಿ ಅಂಕ ಪಟ್ಟಿ/ಕ್ಯುಮುಲೇಟೀವ್ ರೆಕಾರ್ಡ್/ಇನ್ನಾವುದೇ ಅಧಿಕೃತ ದಾಖಲಾತಿಗಳು.
3. ವಿದ್ಯಾರ್ಹತೆಯ ಬಗ್ಗೆ ಅಂಕಪಟ್ಟಿಗಳು.
4. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ –ಡಿ ಯಲ್ಲಿ ಪ್ರವರ್ಗ–1 ರ ಅಭ್ಯರ್ಥಿಗಳು ನಮೂನೆ –ಇ ಯಲ್ಲಿ ಮತ್ತು 2 ಎ , 2 ಬಿ , 3 ಎ ಮತ್ತು 3 ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್'ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.
5. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆ – 2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು.

6. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ – 2 ರ ಜೊತೆ ನಮೂನೆ – 1 ರಲ್ಲೂ ಧೃಢಿಕರಣ ಪತ್ರವನ್ನು ಸಲ್ಲಿಸುವುದು.

7. ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಒಂದನೇ ತರಗತಿಯಿಂದ ಹತ್ತನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಬಗ್ಗೆ ಅಧಿಕೃತ ಅಧಿಕಾರಿಗಳಿಂದ ಪಡೆದು, ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು.

8. ವಿಧವೆಯರು, ಜೀತ ಕಾರ್ಮಿಕರು ವಯೋಮಿತಿ ರಿಯಾಯ್ತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣಪತ್ರವನ್ನು ಸಲ್ಲಿಸುವುದು.

9. ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಂದು 6 ತಿಂಗಳ ಒಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರವನ್ನು ಸಲ್ಲಿಸುವುದು.

10. ಸ್ವಯಂ ವಿಳಾಸವಿರುವ ರೂ 5/– ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಅರ್ಜಿಯೊಂದಿಗೆ ಲಗತ್ತಿಸುವುದು.

ವಿಶೇಷ ಸೂಚನೆಃ

ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಲಗತ್ತಿಸಿರಬೇಕು ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಕಡ್ಡಾಯವಾಗಿ ಸ್ವಯಂ ಧೃಡೀಕರಿಸಿರಬೇಕು.

ಯಾವುದೇ ಅಭ್ಯರ್ಥಿಯು ಸರ್ಕಾರಿ/ಸರ್ಕಾರೇತರ ಅಧಿಕಾರಿಗಳಿಂದ ತನ್ನ ಅಭ್ಯರ್ಥಿತ್ವದ ಬಗ್ಗೆ ಪ್ರಭಾವ ಬೀರಿದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಈ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಛೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.

ವೀರಣ್ಣ .ಜಿ. ತಿಗಡಿ
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಕೋಲಾರ.

ಅರ್ಜಿ ನಮೂನೆ

ರವರಿಗೆ,

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೋಲಾರ.

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದ ಮೇಲೆ ಸಹಿ ಮಾಡಿ ಅಂಟಿಸುವುದು

ತಮ್ಮ ಕಛೇರಿಯ ಅಧಿಸೂಚನೆ ಸಂಖ್ಯೆ ಎಡಿಎಂ/02/2012, ದಿನಾಂಕಃ 06–11–2012 ರ ಮೇರೆಗೆ ನಾನು ______________________ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ ಮತ್ತು ಈ ಕೆಳಕಂಡ ಮಾಹಿತಿಯನ್ನು ಒದಗಿಸುತ್ತಿದ್ದೇನೆ.

	ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ)	
	ತಂದೆ/ಗಂಡನ ಹೆಸರು	
	ತಾಯಿಯ ಹೆಸರು	
	ಜನ್ಮ ದಿನಾಂಕ	

	ವಯಸ್ಸು (ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆ ದಿನಾಂಕದಂದು ಅಭ್ಯರ್ಥಿ ವಯಸ್ಸು)	ವರ್ಷ	ತಿಂಗಳು	ದಿನ
	ಲಿಂಗ	ಪುರುಷ		ಮಹಿಳೆ
	ಅಂಚೆ ವಿಳಾಸ (ದೂರವಾಣಿ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು)			
	ರಾಷ್ಟ್ರೀಯತೆ			
	ಧರ್ಮ ಮತ್ತು ಜಾತಿ			
	ವೈವಾಹಿಕ ಸ್ಥಿತಿ	ವಿವಾಹಿತ		ಅವಿವಾಹಿತ
	ಕೋರುವ ಮೀಸಲಾತಿ (ಪರಿಶಿಷ್ಟ ಜಾತಿ, ಪ್ರವರ್ಗ –I, ಪ್ರವರ್ಗ–II (ಎ), ಪ್ರವರ್ಗ–2 (ಬಿ), ಪ್ರವರ್ಗ– 3(ಎ), ಪ್ರವರ್ಗ – 3(ಬಿ), ಸಾಮಾನ್ಯ) ಯಾವ ಮೀಸಲಾತಿ ಕೋರುತ್ತಿದ್ದೀರಿ ಎಂಬುದನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಗ್ರಾಮೀಣ ಅಥವಾ ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸ್ಪಷ್ಟವಾಗಿ ನಮೂದಿಸತಕ್ಕದ್ದು			
	<u>ವಿದ್ಯಾರ್ಹತೆ</u> ಃ (ಸ್ವಯಂ ಧೃಢಿಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು)	ತೇರ್ಗಡೆಯಾದ ತಿಂಗಳು ಮತ್ತು ವರ್ಷ	ಗರಿಷ್ಟ ಅಂಕಗಳು	ಗಳಿಸಿದ ಅಂಕಗಳು
	ಎಸ್.ಎಸ್.ಎಲ್.ಸಿ;			
	ಕನ್ನಡ ಬೆರಳಚ್ಚು (ಹಿರಿಯ ಶ್ರೇಣಿ)			
	ಆಂಗ್ಲ ಬೆರಳಚ್ಚು (ಹಿರಿಯ ಶ್ರೇಣಿ)			
	ಕನ್ನಡ ಶೀಘ್ರಲಿಪಿ (ಹಿರಿಯ ಶ್ರೇಣಿ)			
	ಆಂಗ್ಲ ಶೀಘ್ರಲಿಪಿ (ಹಿರಿಯ ಶ್ರೇಣಿ)			
	ಇತರೆ ಯಾವುದೇ ವಿದ್ಯಾರ್ಹತೆ (ಸೂಚನೆಃ ಅನ್ವಯಿಸುವ ವಿದ್ಯಾರ್ಹತೆಯ ಅಂಕಣಗಳನ್ನು ಮಾತ್ರ ಭರ್ತಿ ಮಾಡುವುದು)			
	ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರಾ? (ಸರ್ಕಾರಿ ಸೇವೆಯಲ್ಲಿದ್ದಲ್ಲಿ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪತ್ರದ ನಕಲನ್ನು ಲಗತ್ತಿಸಬೇಕು)	ಹೌದು		ಇಲ್ಲ

	ನಿಮ್ಮ ಸ್ವವಿಳಾಸವಿರುವ ರೂ.5/- ರ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಲಗತ್ತಿಸಿದ್ದೀರ?	

ಈ ಮೇಲ್ಕಂಡ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ ಹಾಗೂ ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತ್ವವನ್ನು ರದ್ದುಪಡಿಸಬಹುದೆಂದು ಘೋಷಿಸುತ್ತೇನೆ.

ಸ್ಥಳ :

ದಿನಾಂಕ: **ಅಭ್ಯರ್ಥಿಯ ಸಹಿ.**

PR - 173

ಕರ್ನಾಟಕ ಲೋಕ ಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560 001.

ಸಂಖ್ಯೆ: ಪಿಎಸ್‌ಸಿ 1 ಆರ್‌ಟಿಬಿ–1/2012 ದಿನಾಂಕ: 22–11–2012

ಅಧಿಸೂಚನೆ

1. ಆಯೋಗವು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) ನಿಯಮಗಳು 2006 ರಡಿಯಲ್ಲಿ ಕೆಳಕಂಡ ತಾಂತ್ರಿಕ ಮತ್ತು ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ತುಂಬದೇ ಇರುವ ಸ್ಥಾನಗಳು) (ವಿಶೇಷ ನೇಮಕಾತಿ) ನಿಯಮಗಳು 2001ರನ್ವಯ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು **ON-LINE ಮೂಲಕ** ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ:–

ಭಾಗ–1:– ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) ನಿಯಮಗಳು 2006 ಅನ್ವಯದ ಗ್ರೂಪ್–'ಎ' ಮತ್ತು 'ಬಿ' ತಾಂತ್ರಿಕ ಹುದ್ದೆಗಳು

ಕ್ರಮ ಸಂಖ್ಯೆ	ಇಲಾಖೆಯ ಹೆಸರು ಮತ್ತು ಪದನಾಮ	ಹುದ್ದೆಗಳ ಸಂಖ್ಯೆ
ಗ್ರೂಪ್ – ' ಎ ' ತಾಂತ್ರಿಕ ಹುದ್ದೆಗಳು		
01	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿನ ಸಹಾಯಕ ನಿರ್ದೇಶಕರು	18
02	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಸಿಸ್ಟೆಂಟ್ ಸರ್ಜನ್ಸ್	42+03(ಬ್ಯಾ.ಲಾ)
03	ಸಾರಿಗೆ ಇಲಾಖೆಯಲ್ಲಿನ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು	09
ಗ್ರೂಪ್ – ' ಬಿ ' ತಾಂತ್ರಿಕ ಹುದ್ದೆಗಳು		
04	ಲೋಕೋಪಯೋಗಿ ಇಲಾಖೆಯಲ್ಲಿನ ಸಹಾಯಕ ಅಭಿಯಂತರರು (ಸಿವಿಲ್)	100
05	ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಲ್ಲಿನ ಸಹಾಯಕ ಇಂಜಿನಿಯರ್ (ಸಿವಿಲ್)	07
06	ಕೃಷಿ ಮಾರಾಟ ಇಲಾಖೆಯಲ್ಲಿನ ಸಹಾಯಕ ಅಭಿಯಂತರರು	04(ಬ್ಯಾ.ಲಾ)
07	ಜಲ ಸಂಪನ್ಮೂಲ ಇಲಾಖೆಯಲ್ಲಿನ ಸಹಾಯಕ ಅಭಿಯಂತರರು (ಸಿವಿಲ್)	180
08	ಜಲ ಸಂಪನ್ಮೂಲ ಇಲಾಖೆಯಲ್ಲಿನ ಸಹಾಯಕ ಅಭಿಯಂತರರು (ಮೆಕ್ಯಾನಿಕಲ್)	20
09	ಕರ್ನಾಟಕ ರಾಜ್ಯ ಪತ್ರಗಾರ ನಿರ್ದೇಶನಾಲಯದಲ್ಲಿನ ಸಹಾಯಕ ಪತ್ರಪಾಲಕರು	05
10	ವಾಸ್ತುಶಿಲ್ಪ ಇಲಾಖೆಯಲ್ಲಿನ ಸಹಾಯಕ ವಾಸ್ತುಶಿಲ್ಪಿ	04
11	ತೋಟಗಾರಿಕೆ ಇಲಾಖೆಯಲ್ಲಿನ ಸಹಾಯಕ ತೋಟಗಾರಿಕೆ ಅಧಿಕಾರಿಗಳು(ಬ್ಯಾಕ್‌ಲಾಗ್)	104(ಬ್ಯಾ.ಲಾ)

ಭಾಗ–2:– ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ತುಂಬದೇ ಇರುವ ಸ್ಥಾನಗಳು) (ವಿಶೇಷ ನೇಮಕಾತಿ) ನಿಯಮಗಳು 2001ರನ್ವಯದ ಗ್ರೂಪ್ 'ಎ' ಮತ್ತು 'ಬಿ' ಬ್ಯಾಕ್‌ಲಾಗ್ ಹುದ್ದೆಗಳು

ಗ್ರೂಪ್ 'ಎ' ಬ್ಯಾಕ್‌ಲಾಗ್ ಹುದ್ದೆ		
12	ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಬಂದರು ಅಧಿಕಾರಿ / ಉಪ ನಿರ್ದೇಶಕರು	01
ಗ್ರೂಪ್ 'ಬಿ' ಬ್ಯಾಕ್‌ಲಾಗ್ ಹುದ್ದೆ		
13	ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು	01
14	ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಸಿನಿಮಾಟೋಗ್ರಫಿ ಉಪನ್ಯಾಸಕರು	01
15	ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಟೆಲಿಕಮ್ಯೂನಿಕೇಷನ್ (ಸೌಂಡ್ ಅಂಡ್ ಟಿ.ವಿ.) ಉಪನ್ಯಾಸಕರು	01
16	ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ರಬ್ಬರ್ ಟೆಕ್ನಾಲಜಿ ಉಪನ್ಯಾಸಕರು	01
17	ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಲ್ಲಿನ ಕಿರಿಯ ಜಲಮೋಜಣಿದಾರರು	02

ಟಿಪ್ಪಣಿ: ಅನುಸೂಚಿಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು, ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು.

ಅರ್ಜಿಗಳನ್ನು ಆನ್–ಲೈನ್ (ON-LINE) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

1) ಅಭ್ಯರ್ಥಿಗಳು ಅರ್ಜಿಯನ್ನು On-Line ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು.

2) ಅಭ್ಯರ್ಥಿಗಳು ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ಆಯೋಗವು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:–

GM-General Merit	ST-Scheduled Tribe
C-I-Category I	Ex-MP-Ex-Military Person
2A-Category 2A	Rural-Rural Reservation
2B-Category 2B	KMS-Kannada Medium Student
3A-Category 3A	PDP-Project Displaced Person
3B-Category 3B	PH-Physically Handicapped
SC-Scheduled Caste	

ವಿಶೇಷ ಸೂಚನೆ:– ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಶುಲ್ಕವನ್ನು ಪಾವತಿಸತಕ್ಕದ್ದು.

2. ಶುಲ್ಕ:–

ಭಾಗ–1:–	
ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ	₹: 300/–

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಮತ್ತು ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ	₹: 25/–
ಭಾಗ–2:– ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ತುಂಬದೇ ಇರುವ ಸ್ಥಾನಗಳು) (ವಿಶೇಷ ನೇಮಕಾತಿ) ನಿಯಮಗಳು 2001ರನ್ವಯದ ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯಾವುದೇ ಶುಲ್ಕವನ್ನು ಪಾವತಿಸುವಂತಿಲ್ಲ.	

2.1 ನಿಗದಿತ ಶುಲ್ಕವನ್ನು ಸಿಂಡಿಕೇಟ್ ಬ್ಯಾಂಕಿನ ಯಾವುದೇ ಶಾಖೆಗಳಲ್ಲಿ ಚಲನ್ ನೀಡಿ ಹಣ ಪಾವತಿಸತಕ್ಕದ್ದು. ಈ ಸಂಬಂಧ ON-LINE ನಲ್ಲಿ ಅರ್ಜಿ ಸಲ್ಲಿಸಿ ಬ್ಯಾಂಕಿನ ಚಲನ್‌ಗಳನ್ನು ಡೌನ್‌ಲೋಡ್ ಮಾಡಿಕೊಂಡು ನಿಗದಿಪಡಿಸಿದ ಮೊಬಲಗನ್ನು ಸಂಬಂಧಿಸಿದ ಬ್ಯಾಂಕ್‌ಗೆ ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

3. ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು

ಹಂತ 1:– ಅಭ್ಯರ್ಥಿಗಳು ಆಯೋಗದ ಅಧಿಕೃತ ವೈಬ್‌ಸೈಟ್ "http://kpsc.kar.nic.in" ನ್ನು ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ 'Application For Technical and Backlog Posts' ಎಂದು ಮೂಡುತ್ತದೆ ಮತ್ತು ಅಧಿಸೂಚನೆ/ಪರೀಕ್ಷಾ ಶುಲ್ಕ/ಬ್ಯಾಂಕಿನ ವಿವರಗಳು ಲಭ್ಯವಾಗಲಿದ್ದು, ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ವಿವರಗಳನ್ನು ಮತ್ತು ಅರ್ಜಿ ಸಲ್ಲಿಸುವ ಸೂಚನೆಗಳನ್ನು ತಪ್ಪದೇ ಓದಿಕೊಂಡು ಅದರಂತೆ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

ಹಂತ 2:– ಅರ್ಜಿಯನ್ನು ಭರ್ತಿಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿಗಿನ ಭಾವಚಿತ್ರವನ್ನು ಒಂದು ಸ್ವಚ್ಛವಾದ ಬಿಳಿಯ ಹಾಳೆಯ ಮೇಲೆ ಲಗತ್ತಿಸಿ ಅದರ ಕೆಳಗೆ ಕಪ್ಪು ಶಾಯಿಯ ಸ್ಕೆಚ್/ಮಾರ್ಕರ್ ಪೆನ್ನಿನಿಂದ ಸಹಿಯನ್ನು ಮಾಡಿ (ಯಾವುದೇ ಕಾರಣಕ್ಕೂ ಭಾವ ಚಿತ್ರದ ಮೇಲೆ ಸಹಿ ಮಾಡಬಾರದು) ನಂತರ ಭಾವಚಿತ್ರ (Photo) ಮತ್ತು ಸಹಿಯನ್ನು ಒಳಗೊಂಡಂತೆ ಈ ಕೆಳಗಿನ ಅಳತೆ ಪ್ರಕಾರ ಸ್ಕ್ಯಾನ್ ಮಾಡಿ ಇಟ್ಟುಕೊಂಡಿರತಕ್ಕದ್ದು.

o ಫೈಲ್ ಅಳತೆ<100 ಕೆಬಿ	ಪಾಸ್ ಪೋರ್ಟ್ ಭಾವಚಿತ್ರದ ಅಳತೆಗಳು: 45 ಎಂ.ಎಂ (ಉದ್ದ) X 35 ಎಂ.ಎಂ (ಅಗಲ)
o ಡಿಪಿಐ ಹಿನ್ನೆಲೆ=100 ಡಿಪಿಐ	
o ಇಮೇಜ್ ಅಳತೆ=100%	
o ಕಲರ್	ಸಹಿ ಅಳತೆ: 20ಎಂ.ಎಂ (ಉದ್ದ) X 35 ಎಂ.ಎಂ (ಅಗಲ)
o ಜೆಪಿಇಜಿ (jpeg)	

ಹಂತ 3:– ಸಂಬಂಧಪಟ್ಟ ಹುದ್ದೆಯ ಮೇಲೆ ಕ್ಲಿಕ್ ಮಾಡಿ ಅರ್ಜಿಯನ್ನು ಭರ್ತಿಮಾಡತಕ್ಕದ್ದು. ಅರ್ಜಿಯನ್ನು ಭರ್ತಿಮಾಡಿದ ನಂತರ ನಮೂದಿಸಿರುವ ವಿವರಗಳನ್ನು ಮತ್ತೊಮ್ಮೆ ಕೂಲಂಕಷವಾಗಿ ಪರಿಶೀಲಿಸಬೇಕು. ಅರ್ಜಿಯಲ್ಲಿ ನಮೂದಿಸಿರುವ ವಿವರಗಳಲ್ಲಿ ಏನಾದರೂ ತಪ್ಪುಗಳಾಗಿದ್ದಲ್ಲಿ ಅದನ್ನು ಸರಿಪಡಿಸಲು Edit ಮೇಲೆ ಕ್ಲಿಕ್ ಮಾಡಿ ನಂತರ ಅಗತ್ಯ ತಿದ್ದುಪಡಿಗಳನ್ನು ಮಾಡಬಹುದು.

ಹಂತ 4:– ಅರ್ಜಿಯಲ್ಲಿ ಭರ್ತಿ ಮಾಡಿರುವ ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಮನದಟ್ಟು ಮಾಡಿಕೊಂಡು ನಂತರ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ (Photo)ವನ್ನು upload ಮಾಡತಕ್ಕದ್ದು. Photo upload ಮಾಡಿದ ನಂತರ ಅರ್ಜಿಯಲ್ಲಿನ ವಿವರಗಳು ಸರಿಯಾಗಿರುತ್ತವೆಯೆಂದು ಒಪ್ಪಿರುತ್ತೇನೆ (I agree) ಎಂಬ ಘೋಷಣೆಯ ಮೇಲೆ ಕ್ಲಿಕ್ ಮಾಡತಕ್ಕದ್ದು, ಅನಂತರವೇ Generate Challan ಮತ್ತು Application Preview ಮೂಡಲಿದ್ದು, ಎರಡನ್ನೂ Download ಮಾಡಿ ಕೊಳ್ಳತಕ್ಕದ್ದು. ಮತ್ತು ಅರ್ಜಿಯ ಪ್ರತಿಯನ್ನು ಮತ್ತು ಶುಲ್ಕ ಸಂದಾಯ ಮಾಡಿದ ಚಲನ್‌ಅನ್ನು ಕಡ್ಡಾಯವಾಗಿ ಅಭ್ಯರ್ಥಿಗಳು ತಮ್ಮೊಂದಿಗೆ ಇಟ್ಟುಕೊಳ್ಳತಕ್ಕದ್ದು. ಆಯೋಗವು ಅಪೇಕ್ಷಿಸಿದಾಗ ಈ ಚಲನ್ ಅನ್ನು ಹಾಜರುಪಡಿಸಬೇಕು.

ಹಂತ 5:– Download ಮಾಡಿಕೊಳ್ಳಲಾದ Challan ನಲ್ಲಿರುವ ಶುಲ್ಕವನ್ನು ಸಿಂಡಿಕೇಟ್ ಬ್ಯಾಂಕಿನ ಯಾವುದೇ ಶಾಖೆಗಳಲ್ಲಿ ಚಲನ್ ನೀಡಿ ಹಣ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಸಿಂಡಿಕೇಟ್ ಬ್ಯಾಂಕ್ ಅನ್ನು ಹೊರತುಪಡಿಸಿ ಇತರೆ ಯಾವುದೇ ಬ್ಯಾಂಕಿನಲ್ಲಿ ಶುಲ್ಕ ಸಂದಾಯ ಮಾಡುವಂತಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕೃತಗೊಳಿಸಲಾಗುವುದು.

3.1 ಅಭ್ಯರ್ಥಿಗಳು ತಮ್ಮ ಅರ್ಜಿಯ ಸ್ಥಿತಿಯನ್ನು ತಿಳಿಯಬೇಕಾದಲ್ಲಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಐದು ದಿನಗಳ ತರುವಾಯ, ಆಯೋಗದ ವೆಬ್‌ಸೈಟ್‌ನ Check Status ಲಿಂಕಿನಲ್ಲಿ ಮಾಹಿತಿಗಳನ್ನು ದಾಖಲಿಸಿ, ಅರ್ಜಿಯು ಸಿಂಧುವಾಗಿರುವ ಬಗ್ಗೆ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ. ತಮ್ಮ ಅರ್ಜಿಯ ಮಾಹಿತಿ ಆಯೋಗದ ವೆಬ್ ಸೈಟ್ ನಲ್ಲಿ ದೊರೆಯದಿದ್ದಲ್ಲಿ ನೀವು ಪಾವತಿಸಿರುವ ಶುಲ್ಕದ ವಿವರವುಳ್ಳ ಚಲನ್ ಪ್ರತಿಯೊಂದಿಗೆ ಆಯೋಗವನ್ನು ಸಂಪರ್ಕಿಸಬಹುದು.

3.2 ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

* **ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 26–11–2012.**

* **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 26–12–2012.**

* **ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 27–12–2012.**

ವಿಶೇಷ ಸೂಚನೆ: On-line ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) 9740977411 ಮತ್ತು 9741966115 ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

4. ಅರ್ಹತಾ ಷರತ್ತುಗಳು:–

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

5 (1) ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ:–

ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006 ರಲ್ಲಿ ನಿರ್ದಿಷ್ಟಪಡಿಸಲಾದಂತೆ, ಅಧಿಸೂಚಿಸಲಾಗಿರುವ ಯಾವುದೇ ತಾಂತ್ರಿಕ/ ತಾಂತ್ರಿಕೇತರ ಹುದ್ದೆಗಳ ಸಂದರ್ಶನಕ್ಕೆ ಅರ್ಹರಾಗಲು ಅಭ್ಯರ್ಥಿಗಳು ಆಯೋಗ ನಡೆಸುವ ಎಸ್.ಎಸ್.ಎಲ್.ಸಿ.ಯ ಕನ್ನಡ ಪ್ರಥಮ ಭಾಷೆಯ ಮಟ್ಟದ 150 ಅಂಕಗಳಿಗೆ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳೊಂದಿಗೆ ಕಡ್ಡಾಯವಾಗಿ ತೇರ್ಗಡೆ ಹೊಂದಲೇಬೇಕು. ನಿಗದಿಪಡಿಸಿದ ಕನಿಷ್ಠ 50 ಅಂಕಗಳನ್ನು ಪಡೆಯದ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಾಗುವುದಿಲ್ಲ ಹಾಗೂ ಈ ಕನ್ನಡ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಆಯ್ಕೆಗೆ ಪರಿಗಣಿಸುವುದಿಲ್ಲ.

ಆದರೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯ ವಿನಾಯಿತಿ ಬಗ್ಗೆ ಕೆಳಕಂಡ ಷರತ್ತುಗಳನ್ನು ಸೇರ್ಪಡಿಸಲಾಗಿರುತ್ತದೆ.

" ಎಸ್.ಎಸ್.ಎಲ್.ಸಿ. ಅಥವಾ ಇದಕ್ಕೆ ತತ್ಸಮಾನವೆಂದು ರಾಜ್ಯ ಸರ್ಕಾರದಿಂದ ಘೋಷಿಸಲ್ಪಟ್ಟ ಇತರೆ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ. ಪರೀಕ್ಷೆಗಿಂತ ಮೇಲ್ಮಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ, ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ (ಆದರೆ ಸಂಯುಕ್ತ ಪತ್ರಿಕೆಯ ವಿಷಯಗಳಲ್ಲೊಂದಾಗಿರಬಾರದು) ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿರುವ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಇದೇ ನಿಯಮಗಳಡಿಯಲ್ಲಿ ಈ ಹಿಂದೆ ನಡೆಸಲ್ಪಟ್ಟ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವ ಅಭ್ಯರ್ಥಿಗಳು, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದರಿಂದ ವಿನಾಯಿತಿ ಹೊಂದಿರುತ್ತಾರೆ ".

ವಿಶೇಷ ಸೂಚನೆ:– ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಅಭ್ಯಸಿಸಿರುವ ಅಭ್ಯರ್ಥಿಗಳು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ತೆಗೆದುಕೊಳ್ಳಲೇಬೇಕಿರುತ್ತದೆ.

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ಪಡೆಯಲು ಅರ್ಜಿಯ ನಿಗದಿತ ಸ್ಥಳದಲ್ಲಿ ವಿವರಗಳನ್ನು ನೀಡತಕ್ಕದ್ದು. ಸರಿಯಾದ ಮಾಹಿತಿ ಒದಗಿಸದಿದ್ದಲ್ಲಿ ಮೇಲಿನ ವಿನಾಯಿತಿಗಳನ್ನು ಪಡೆಯಲು ಅರ್ಹತೆ ನೀಡುವುದಿಲ್ಲ.

ಸೂಚನೆ:– ಕನ್ನಡ ಕಡ್ಡಾಯ ಭಾಷಾ ಪರೀಕ್ಷೆ ಬಗ್ಗೆ ಪಠ್ಯಕ್ರಮವನ್ನು ಆಯೋಗದ ವೆಬ್ ಸೈಟ್ "http://kpsc.kar. nic.in/SYLLABUS" ನಲ್ಲಿ ಬಿತ್ತರಿಸಲಾಗಿದೆ.

5.2 ಭಾಗ–1–ಗ್ರೂಪ್–ಎ ಮತ್ತು ಬಿ ತಾಂತ್ರಿಕ ಹುದ್ದೆಗಳ ನೇಮಕಾತಿ ವಿಧಾನ

(ಸಂದರ್ಶನದ ಮೂಲಕ ಆಯ್ಕೆ):–

5 (3) ನೇಮಕಾತಿ ವಿಧಾನ:– ಸಂದರ್ಶನ ಮೂಲಕ ಆಯ್ಕೆ

ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006 ರಲ್ಲಿ ನಿರ್ದಿಷ್ಟಪಡಿಸಲಾದ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹರಾದ ನಂತರ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006ರ ಉಪನಿಯಮ 6ರನ್ವಯ ಅಭ್ಯರ್ಥಿಗಳನ್ನು ಅವರು ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಶೇಕಡವಾರು ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಆಧಾರದ ಮೇಲೆ 1:3 ಅನುಪಾತದಲ್ಲಿ ಸಂದರ್ಶನಕ್ಕೆ ಆಹ್ವಾನಿಸಲಾಗುವುದು. ಅಭ್ಯರ್ಥಿಗಳು ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

ಸಂದರ್ಶನ ನಡೆಸುವ ಉದ್ದೇಶ ಎಂದರೆ ಅಭ್ಯರ್ಥಿಗಳು ಆಯ್ಕೆ ಬಯಸಿದ ಹುದ್ದೆಗೆ ಅವರ ಅರ್ಹತೆ, ವ್ಯಕ್ತಿತ್ವ, ಸಂಬಂಧಿತ ವಿಷಯದಲ್ಲಿ ವ್ಯಕ್ತಪಡಿಸುವ ಸಾಮರ್ಥ್ಯತೆ, ಸೂಕ್ಷ್ಮತೆ ಮತ್ತು ಕರ್ತೃತ್ವ ಶಕ್ತಿ, ಸಾಮಾನ್ಯ ಜ್ಞಾನ ಹಾಗೂ ವಿಷಯದಲ್ಲಿನ ಪರಿಜ್ಞಾನ ಹಾಗೂ ಇನ್ನಿತರ ವಿಶೇಷ ಗುಣಗಳನ್ನು ನಿರ್ಧರಿಸುವುದಾಗಿದ್ದು, ಅಭ್ಯರ್ಥಿಗಳು ಆಯಾ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಶೇಕಡವಾರು ಅಂಕಗಳ ಮತ್ತು ಆಯೋಗವು ನಡೆಸುವ ಸಂದರ್ಶನದಲ್ಲಿ ಗಳಿಸಿದ ಅಂಕಗಳ ಜೇಷ್ಠತೆಯ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

ಸಂದರ್ಶನಕ್ಕೆ ನಿಗದಿಪಡಿಸಲಾದ ಗರಿಷ್ಠ ಅಂಕಗಳು 15 (ಹದಿನೈದು)

6. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:–

6(ಎ) **ಶೈಕ್ಷಣಿಕ ವಿದ್ಯಾರ್ಹತೆ:–** ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.

6(ಬಿ) ಯಾವುದೇ ಹುದ್ದೆಗೆ ಸೇವಾನುಭವವನ್ನು ನಿಗದಿಪಡಿಸಿದಾಗ ಅಭ್ಯರ್ಥಿಗಳು ವಿದ್ಯಾರ್ಹತೆ ಹೊಂದಿದ ನಂತರ ಸೇವಾನುಭವ ಹೊಂದಿರತಕ್ಕದ್ದು.

6(ಸಿ) ಯಾವುದೇ ಹುದ್ದೆಗೆ ಆದ್ಯತಾ ವಿದ್ಯಾರ್ಹತೆಯನ್ನು ನಿಗದಿಪಡಿಸಿದಾಗ ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂಕಗಳ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿಯನ್ನಾಧರಿಸಿ ಸಂದರ್ಶನಕ್ಕೆ ಪರಿಗಣಿಸಲಾಗುವುದು. ಆಯ್ಕೆಪಟ್ಟಿಯನ್ನು ಸಿದ್ಧಪಡಿಸುವಾಗ ಆದ್ಯತಾ ವಿದ್ಯಾರ್ಹತೆ ಹೊಂದಿರುವ ಮತ್ತು ಆದ್ಯತಾ ವಿದ್ಯಾರ್ಹತೆ ಹೊಂದದೇ ಇರುವ ಅಭ್ಯರ್ಥಿಗಳ ಅಂಕಗಳ ಜೇಷ್ಠತೆಯ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಆಧಾರದ ಮೇಲೆ ಮಾಡಲಾಗುವುದು.

ತಾಂತ್ರಿಕ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಆಯಾ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಗಳಿಸಿರುವ ಶೇಕಡವಾರು ಅಂಕಗಳ ಆಧಾರದ ಮೇಲೆ ಸಂದರ್ಶನಕ್ಕೆ ಆಹ್ವಾನಿಸುವುದರಿಂದ ಅಭ್ಯರ್ಥಿಗಳು ಅರ್ಜಿಯಲ್ಲಿ ಎಲ್ಲಾ ಸೆಮಿಸ್ಟರ್ / ವರ್ಷಗಳಲ್ಲಿ ಗಳಿಸಿರುವ ಒಟ್ಟಾರೆ ಅಂಕಗಳನ್ನು ಕ್ರೋಢೀಕರಿಸಿ ಗರಿಷ್ಠ ಮತ್ತು ಪಡೆದಿರುವ ಅಂಕಗಳನ್ನು ಸ್ಪಷ್ಟವಾಗಿ ನಮೂದಿಸುವುದು. ಕೆಲವು ವಿಶ್ವವಿದ್ಯಾನಿಲಯಗಳು ಮೊದಲನೆ ಬಾರಿ ಗಳಿಸಿರುವ ಅಂಕಗಳನ್ನು ಮಾತ್ರ ನಮೂದಿಸಿದ್ದು, ಒಂದಕ್ಕಿಂತ ಹೆಚ್ಚು ಬಾರಿ ಬರೆದು ಉತ್ತೀರ್ಣರಾಗಿರುವ ಅಂಕಗಳನ್ನು ಗಣನೆಗೆ ತೆಗೆದುಕೊಂಡಿರುವುದಿಲ್ಲ. ಅಭ್ಯರ್ಥಿಗಳು ಆ ಅಂಕಗಳನ್ನು ಸೇರಿಸಿಕೊಂಡು ಜೊತೆಗೆ ಗ್ರೇಸ್ ಮಾರ್ಕ್ಸ್‌ನ್ನು ನೀಡಿದ್ದಲ್ಲಿ ಅದನ್ನು ಒಟ್ಟು ಅಂಕಗಳೊಂದಿಗೆ ಸೇರಿಸಿಕೊಂಡು ಅಂಕಗಳನ್ನು ನಮೂದಿಸುವುದು ಹಾಗೂ ಗ್ರೇಡ್ ಅಂಕಗಳನ್ನು ಪಡೆದ ಅಭ್ಯರ್ಥಿಗಳು ಅವರ ಗ್ರೇಡ್ ಅಂಕಗಳನ್ನು ಶೇಕಡವಾರು ಅಂಕಗಳಿಗೆ ಪರಿವರ್ತಿಸಿ ವಿಶ್ವವಿದ್ಯಾಲಯ ನೀಡಿರುವ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ಶೇಕಡವಾರು ಅಂಕಗಳನ್ನು ತಪ್ಪದೇ ನಮೂದಿಸಬೇಕು. ಅಂಕಗಳು ವ್ಯತ್ಯಾಸ ಕಂಡು ಬಂದಲ್ಲಿ ಅಭ್ಯರ್ಥಿಯೇ ಜವಾಬ್ದಾರರಾಗಿರುತ್ತಾರೆ. ತಪ್ಪಿದ್ದಲ್ಲಿ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

6.1 **ವಯೋಮಿತಿ:–** ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿದಂತೆ, ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

(ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು

ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(ಆ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ವಿವರಣೆ:– (1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ. ಮತ್ತು

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವನು.

ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:–

i) ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.

ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ವಿವರಣೆ:– ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು.

(ಇ) ಅಭ್ಯರ್ಥಿಗಳು ನ್ಯಾಷನಲ್ ಕ್ಯಾಡೆಟ್ ಕೋರ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂಥ ಕ್ಯಾಡೆಟ್ ಪರಿವೀಕ್ಷನಾಗಿ ಅವನು ಸೇವೆ ಸಲ್ಲಿಸಿದಷ್ಟು ವರ್ಷಗಳು.

(ಈ) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅವನು / ಅವಳು ಅಂತಹ ಗ್ರಾಮ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(ಉ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು

(ಊ) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(ಋ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

(ೠ) ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು.

ಉಪ ಕಂಡಿಕೆ 6.1.(ಋ) ರ ಮೇರೆಗೆ ವಯೋಮಿತಿಯ ಸಡಿಲಿಕೆಯನ್ನು ಕೋರುವ ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದು, ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದು ಹಾಜರುಪಡಿಸಬೇಕು.

6.2 ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ತುಂಬದೇ ಇರುವ ಸ್ಥಾನಗಳು) (ವಿಶೇಷ ನೇಮಕಾತಿ) ನಿಯಮಗಳು 2001ರನ್ವಯ ಭರ್ತಿ ಮಾಡುವ ಬ್ಯಾಕ್‌ಲಾಗ್ ಹುದ್ದೆಗಳು:–

ನೇಮಕಾತಿ ವಿಧಾನ:– ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನಾಗಲೀ ಅಥವಾ ಸಂದರ್ಶನವನ್ನಾಗಲೀ (Personality Test) ಎದುರಿಸಬೇಕಾಗಿರುವುದಿಲ್ಲ. ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು(ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ತುಂಬದೇ ಇರುವ ಸ್ಥಾನಗಳು) (ವಿಶೇಷ ನೇಮಕಾತಿ) ನಿಯಮಗಳು 2001ರನ್ವಯ, ಆಯಾ ಹುದ್ದೆಗಳಿಗೆ ನಿಗದಿಪಡಿಸಿದ್ದ ವಿದ್ಯಾರ್ಹತೆಯಲ್ಲಿ ಅಭ್ಯರ್ಥಿಗಳು ಗಳಿಸಿದ್ದ ಒಟ್ಟು ಅಂಕಗಳ ಶೇಕಡಾವಾರನ್ನು ಆಧರಿಸಿ 18 ವರ್ಷದಿಂದ 28 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಒಂದು ಜ್ಯೇಷ್ಠತಾ ಪಟ್ಟಿಯನ್ನು ಹಾಗೂ 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಇನ್ನೊಂದು ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಇದರ ಆಧಾರದಂತೆ ಆಯ್ಕೆ ಮಾಡಲಾಗುವುದು. ಆಯ್ಕೆ ಮಾಡುವಾಗ 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಜ್ಯೇಷ್ಠತಾ ಪಟ್ಟಿಯಲ್ಲಿರುವವರಿಗೆ ಮೊದಲ ಆದ್ಯತೆ ನೀಡಲಾಗುವುದು.

ಬ್ಯಾಕ್‌ಲಾಗ್ ಹುದ್ದೆಗಳು : ಶೈಕ್ಷಣಿಕ ವಿದ್ಯಾರ್ಹತೆ:– ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಯ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು.

ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೇ, ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ. ಸದರಿ ಹುದ್ದೆಗಳ ನೇಮಕಾತಿಯನ್ನು ನಿಯಮಗಳಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಜ್ಯೇಷ್ಠತೆಯನುಸಾರ ಮಾಡಲಾಗುವುದರಿಂದ ಅಭ್ಯರ್ಥಿಗಳು ಅಂಕಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ತಪ್ಪಿದ್ದಲ್ಲಿ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

6.3 **ಬ್ಯಾಕ್‌ಲಾಗ್ ಹುದ್ದೆಗಳಿಗೆ ವಯೋಮಿತಿ:–** ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ 18 ವರ್ಷ ಹೊಂದಿರಬೇಕು. ಹಾಗೂ ಗರಿಷ್ಠ 40 ವರ್ಷ ವಯೋಮಿತಿಯನ್ನು ಮೀರಿರಬಾರದು. ನಿಯಮಗಳಲ್ಲಿ ಈ ಬ್ಯಾಕ್‌ಲಾಗ್ ಹುದ್ದೆಗಳಿಗೆ ವಯೋಮಿತಿ ಸಡಿಲಿಕೆಗೆ ಅವಕಾಶವಿರುವುದಿಲ್ಲ.

7. **ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು :–**

ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:–

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ ' ಡಿ '

ಆ) ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ ' ಇ '

ಇ) ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:– ನಮೂನೆ ' ಎಫ್ '

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂದರೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ನೀವು ಪಡೆದಿರುವ ಪ್ರಮಾಣ ಪತ್ರದ ಚಾಲ್ತಿ 5 ವರ್ಷದ ಅವಧಿಯು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಿರಬೇಕು. ಅರ್ಜಿಯ ನಿಗದಿತ ಸ್ಥಳದಲ್ಲಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ನಮೂದಿಸತಕ್ಕದ್ದು, ಹಾಗೂ ಅದೇ ಪ್ರಮಾಣ ಪತ್ರವನ್ನು ಸಂದರ್ಶನ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

8. ಗ್ರಾಮೀಣ ಅಭ್ಯರ್ಥಿ:–

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೇನೆನಿ 2001 ದಿನಾಂಕ 13–02–2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ

ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

9. ಕನ್ನಡ ಮಾಧ್ಯಮ ಅಭ್ಯರ್ಥಿ

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೇನೇನಿ 2001 ದಿನಾಂಕ 24–10–2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

10. ಅಂಗವಿಕಲ ಅಭ್ಯರ್ಥಿ

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ 03–09–2005 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ –' ಎ ' ಮತ್ತು ' ಬಿ ' ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು (ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 21 ಎಸ್‌ಆರ್‌ಆರ್ 2008 ದಿನಾಂಕ 03–08–2009ರ ಅನುಸೂಚಿಯಡಿ ಸೇರ್ಪಡೆ ಮಾಡಲಾಗಿರುವ ಇಲಾಖೆಗಳು) ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೇನಿ 2005 ದಿನಾಂಕ 19–11–2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 18–02–2011ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಮೂಲ ದಾಖಲಾತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಈ ಅಧಿಸೂಚನೆಯಲ್ಲಿ ಅನುಬಂಧಿಸಲಾಗಿದೆ. ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು.

11 (ಎ) ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಬೆಂಗಳೂರು / ಮೈಸೂರು / ಧಾರವಾಡ / ಗುಲ್ಬರ್ಗಾ / ಶಿವಮೊಗ್ಗ ಕೇಂದ್ರಗಳಲ್ಲಿ ನಡೆಸಲಾಗುವುದು.

ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿ ಅವರು ಈ ಮೇಲಿನ ಪರೀಕ್ಷೆಯನ್ನು ತೆಗೆದುಕೊಳ್ಳಲು ಇಚ್ಛಿಸುವ ಕೇಂದ್ರವನ್ನು ನಮೂದಿಸತಕ್ಕದ್ದು. ಪರೀಕ್ಷಾ ಕೇಂದ್ರವನ್ನು ನಿಗದಿಪಡಿಸುವುದು ಆಯೋಗದ ಅಂತಿಮ ತೀರ್ಮಾನವಾಗಿರುತ್ತದೆ. ಈ ಪರೀಕ್ಷೆಗೆ **ದಿನಾಂಕವನ್ನು ನಿಗದಿಪಡಿಸಿದಾಗ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಅಂಚೆ ಮೂಲಕ ರವಾನಿಸಲಾಗುವುದು ಇಲ್ಲವೆ ವೆಬ್ ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಲು ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಆಯೋಗದ ವೆಬ್ ಸೈಟ್‌ನಲ್ಲಿ ಬಿತ್ತರಿಸಲಾಗುವುದು.**

(ಬಿ)ಆಯಾ ಹುದ್ದೆಗಳಿಗೆ ಸಂದರ್ಶನ ದಿನಾಂಕ ನಿಗದಿಪಡಿಸಿ ಆಯೋಗದ ಜಾಲ ತಾಣ (Web Site)ದಲ್ಲಿ ಬಿತ್ತರಿಸಲಾಗುವುದು ಹಾಗೂ ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಪತ್ರಗಳನ್ನು Speed Post ಮುಖಾಂತರ ಕಳುಹಿಸಲಾಗುವುದು. ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಪತ್ರ ಸ್ವೀಕೃತವಾಗದಿದ್ದಲ್ಲಿ ಆಯೋಗವನ್ನು ಸಂಪರ್ಕಿಸಬಹುದು. ವಿಶೇಷ ನೇಮಕಾತಿ ನಿಯಮಗಳು 2001ರನ್ವಯ ಬ್ಯಾಕ್‌ಲಾಗ್ ಹುದ್ದೆಗಳಿಗೆ 1:2 ಅನುಪಾತದಲ್ಲಿ ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳಿಗೆ ಸೂಚನೆ ಪತ್ರಗಳನ್ನು ಸ್ಪೀಡ್ ಪೋಸ್ಟ್ ಮುಖಾಂತರ ರವಾನಿಸಲಾಗುವುದು.

ಆಯೋಗದೊಡನೆ ಪತ್ರ ವ್ಯವಹಾರ:

ಆಯೋಗವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಸಂದರ್ಶನಕ್ಕೆ ಅನುಮತಿಸಲಾದ ಅಭ್ಯರ್ಥಿಯಾಗಿದ್ದರೆ ಸಂದರ್ಶನ ಪತ್ರದ ನಕಲನ್ನು ನೀಡಲಾಗುವುದು.

ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಆಯೋಗದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಆಯೋಗವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಆಯೋಗವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ಆಯೋಗದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳು ಒಳಗೊಂಡಿರಬೇಕು:–

(i) ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

12. **ಪ್ರಾಮುಖ್ಯವಾದ ಸೂಚನೆಗಳು:–**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಿಟ್ಟು ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ಲ್ಲಿ ಸಹಿಯನ್ನು ಸ್ಕಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ON LINE ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅದೇ ಮೀಸಲಾತಿ ಪ್ರಮಾಣ ಪತ್ರದ / ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಸಂದರ್ಶನಕ್ಕೆ / ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಪರಿಶೀಲನೆಗೆ ಹಾಜರುಪಡಿಸಬೇಕು. ಇತರೆ ನಮೂನೆಗಳಲ್ಲಿ ಅಥವಾ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ತಪ್ಪಿದ್ದಲ್ಲಿ ಇವರ ಮೀಸಲಾತಿಯನ್ನು ತಿರಸ್ಕರಿಸಲಾಗುವುದು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

1) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಬ್ಯಾಂಕಿನಲ್ಲಿ ಪಾವತಿಸಿದ ಚಲನ್ ಪ್ರತಿ.
2) ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ /ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರಗಳು / ಗ್ರೇಡ್‌ನ್ನು ಶೇಕಡವಾರು ಅಂಕಗಳಿಗೆ ಪರಿವರ್ತಿಸಿದ ಪ್ರಮಾಣ ಪತ್ರ
3) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ /ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
4) ನಿರಾಕ್ಷೇಪಣಾ ಪತ್ರ. (ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ)
5) ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
6) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿಗಳ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
7) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
8) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
9) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
10) ಸೇವಾನುಭವ ಪ್ರಮಾಣ ಪತ್ರಗಳು (ನಿಗದಿಪಡಿಸಿದಲ್ಲಿ)
11) ಹೌಸ್‌ಮೆನ್‌ಷಿಪ್ /ಇಂಟರ್ನ್‌ಷಿಪ್ ಪೂರ್ಣಗೊಳಿಸಿದ ಪ್ರಮಾಣ ಪತ್ರ (ಅಸಿಸ್ಟೆಂಟ್ ಸರ್ಜನ್ ಹುದ್ದೆಗೆ)
12) ಕೆ.ಎಂ.ಸಿ. ರಿಜಿಸ್ಟ್ರೇಷನ್ / ಆರ್ಕಿಟೆಕ್ಟ್ ನೋಂದಣಿ ಪ್ರಮಾಣ ಪತ್ರ (ನಿಗದಿಪಡಿಸಿದ್ದಲ್ಲಿ)

13. **ವಿಶೇಷ ಸೂಚನೆಗಳು:–**

(1) ON LINE ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.

(2) ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿಯನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು ಮತ್ತು ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಸಂದರ್ಶನದ / ಮೂಲ ದಾಖಲಾತಿಯ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು ತಪ್ಪಿದ್ದಲ್ಲಿ ಅನರ್ಹಗೊಳಿಸಲಾಗುವುದು.

(3) ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವಾಗುವುದು.

14. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:

ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ	:	080–30574957 080–30574901
		080–22343137 080–22343138
		080–22343139 080–30574938
		080–30574946 080–30574940
ಪ್ರಾಂತೀಯ ಕಛೇರಿ ಮೈಸೂರು	:	0821–2545956
ಪ್ರಾಂತೀಯ ಕಛೇರಿ ಬೆಳಗಾವಿ :		0831–2475345
ಪ್ರಾಂತೀಯ ಕಛೇರಿ ಗುಲ್ಬರ್ಗಾ	:	08472–227944
ಪ್ರಾಂತೀಯ ಕಛೇರಿ ಶಿವಮೊಗ್ಗ	:	08182–228099

15. **ದುರ್ನಡತೆ:–** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು / ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಸಂದರ್ಶನದಿಂದ / ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಕೆ.ಆರ್.ಸುಂದರ್
ಕಾರ್ಯದರ್ಶಿ,
ಕರ್ನಾಟಕ ಲೋಕ ಸೇವಾ ಆಯೋಗ

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಡಿ

(ನಿಯಮ 3ಎ (2) (3) ನೋಡಿ)

ಅನುಸೂಚಿತ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

ಪ್ರಮಾಣ ಪತ್ರ

.... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .... ಜಿಲ್ಲೆಯ / ವಿಭಾಗದ .... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .... ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ .... ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * .... ಮತ್ತು / ಅಥವಾ ಅವನ* / ಅವಳ* ಕುಟುಂಬವು ....ರಾಜ್ಯ / ಕೇಂದ್ರಾಡಳಿತ ಪ್ರದೇಶದ .... ಜಿಲ್ಲಾ / ವಿಭಾಗದ ....ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ...

ತಹಶೀಲ್ದಾರ್..

ಸ್ಥಳ : ಪದನಾಮ

ದಿನಾಂಕ: ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

*** ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

________________ ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ________________ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ________________ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ________________ ಜಾತಿಯ ________________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.

ಸ್ಥಳ :

ದಿನಾಂಕ :

ತಹಶೀಲ್ದಾರ್

________________ ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು

ಜಾತಿ ಪ್ರಮಾಣ ಪತ್ರ

________________ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ________________ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ________________ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

